# ಜಿಲ್ಲಾ ಕಛೇರಿಯ ಬಗ್ಗೆ ಸಂಕ್ಷೀಪ್ತ ವಿವರ



**ಶ್ರೀ ಮಹಿಮೂದ್**
**ಜಿಲ್ಲಾ ಅಧಿಕಾರಿಗಳು,**
**ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,ಕಲಬುರಗಿ**

ಕಲಬುರಗಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ಕಾರ್ಯಲಯವು 2009–10ರಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ವಿಭಜನೆಗೊಂಡು, ಸ್ವತಂತ್ರವಾಗಿ ಕಾರ್ಯನಿರ್ವಹಿಸುತ್ತಿರುತ್ತದೆ. ಅಧೀಸೂಚಿತ ಅಲ್ಪಸಂಖ್ಯಾತರ ಸಮುದಾಯಗಳಾದ ಮುಸ್ಲಿಂ, ಕ್ರೈಸ್ತರು, ಜೈನರು, ಬೌದ್ಧರು, ಸಿಖ್ಖರು, ಮತ್ತು ಪಾರ್ಸಿಗಳಿಗೆ ಸಂಬಂಧಿಸಿದ ವಿಚಾರಗಳ ಬಗ್ಗೆ ಹೆಚ್ಚು ಗಮನ ಹರಿಸುವುದು ಈ ಇಲಾಖೆಯ ಮುಖ್ಯ ಧೇಯವಾಗಿರುವುದು. ಎಲ್ಲಾ ಅಲ್ಪಸಂಖ್ಯಾತ ಸಮುದಾಯಗಳ ಜನರು, ಸಾಮಾಜಿಕ, ಆರ್ಥಿಕ ಶೈಕ್ಷಣಿಕ ಮುಂತಾದ ಕ್ಷೇತ್ರಗಳಲ್ಲಿ ಸಮಾನ ಅವಕಾಶಗಳನ್ನು ಪಡೆದು ಪ್ರಗತಿಪರ ಜೀವನ ನಡೆಸುವಂತೆ ಅವರಿಗೆ ಸೌಲಭ್ಯಗಳನ್ನು ಒದಗಿಸುವ ಗುರಿಯೊಡನೆ ನಿರ್ದೇಶನಾಲಯ ಕಾರ್ಯ ನಿರ್ವಹಿಸುತ್ತಿರುವುದು. ಅಲ್ಪಸಂಖ್ಯಾತರ ಸಮುದಾಯದ ಅನುಕೂಲಕ್ಕಾಗಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ಯೋಜಿಸುವುದು, ಸಮನ್ವಯ, ಮೌಲ್ಯಮಾಪನ ಮತ್ತು ಅನುಷ್ಠಾನಗೊಳಿಸುವ ಕಾರ್ಯವು ನಿರ್ದೇಶನಾಲಯದ ಜವಬ್ದಾರಿಯಾಗಿರುವುದು, ಅಲ್ಪಸಂಖ್ಯಾತರ ಸಾಮಾಜಿಕ ಆರ್ತಿಕ ಅಭಿವೃದ್ಧಿಯನ್ನು ಪ್ರವರ್ಧನೆಗೊಳಿಸುವುದು, ವಿದ್ಯಾರ್ಥಿಗಳೀಗೆ ಶೈಕ್ಷಣಿಕ ರಿಯಾಯ್ತಿಗಳನ್ನು ಒದಗಿಸುವುದು, ಮಹಿಳೆಯರು, ಮತ್ತು ಮಕ್ಕಳ ಅಭಿವೃದ್ಧಿಗಾಗಿ ಯೋಜನೆಗಳ ಅನುಷ್ಠಾನ ತರಬೇಥಿ ಮತ್ತು ಉದ್ಯೋಗಾವಾಕಾಶಗಳನ್ನು ಒದಗಿಸುವುದು, ಇದರ ಮೂಲಕ ಅಲ್ಪಸಂಖ್ಯಾತರ ಆರ್ಥಿಕ ಹಿಂದುಳಿದಿರುವುವಿಕೆ ಸಮಸ್ಯೆ ನಿವಾರಿಸುವುದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಪ್ರಮುಖ ಉದ್ಧೇಶವಾಗಿದೆ. ರಾಜ್ಯ ಮತ್ತು ಕೇಂದ್ರ ಸರ್ಕಾರದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಯೋಜನೆಗಳ ಅನುಷ್ಠಾನಕ್ಕೆ ಅಲ್ಪಸಂಖ್ಯಾತರ ನಿರ್ದೇಶನಾಲಯವು ನೋಡಲ್ ಏಜೆನ್ಸಿಯಾಗಿದೆ. ನಿರ್ದೇಶನಾಲಯವು ಬೆಂಗಳೂರಿನಲ್ಲಿರುವುದು.

**ಶ್ರೀ. ಮಹಿಮೂದ್** ಇವರು, ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಅಧಿಕಾರಿಗಳ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿರುತ್ತಾರೆ. ಜಿಲ್ಲಾ ಕಚೇರಿಯಲ್ಲಿ ಯೋಜನೆಗಳನ್ನು ನಿಗದಿತ ಸಮಯದಲ್ಲಿ ಅನುಷ್ಠಾನಗೊಳಿಸಲು ಒಟ್ಟು 8 ಜನ ಸಿಬ್ಬಂದಿಯವರು ಕಾರ್ಯನಿರ್ವಹಿಸುತ್ತಿರುತ್ತಾರೆ.

ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಸದರಿ ಕೇಂದ್ರಗಳ ಮೂಲಕ ರಾಜ್ಯ ಮತ್ತು ಕೇಂದ್ರ ಸರಕಾರದಿಂದ ಜಾರಿಗೊಳಿಸಲಾಗುವ ಯೋಜನೆಗಳನ್ನು ಅಲ್ಪಸಂಖ್ಯಾತರ ಸಮುದಾಯದ ಜನರಿಗೆ ತಲುಪಿಸಲಾಗುತ್ತಿದೆ.

2011ರ ಜನಗಣತಿ ಪ್ರಕಾರ ಜಿಲ್ಲೆಯಲ್ಲಿ ಮತೀಯ ಅಲ್ಪಸಂಖ್ಯಾತರ ಜನಸಂಖ್ಯೆ ವಿವರ ಕೆಳಕಂಡಂತಿದೆ

| Sl. No | Total Population | Muslim, | Christatin | Jain | Buddist | Sikh | Total | Minority % |
|---|---|---|---|---|---|---|---|---|
| 1 | 61095297 | 7893066 | 1142647 | 28773 | 95710 | 440280 | 9600475 | 15.70% |